**Exc 33/2021**

ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು. ದಿಃ 28-02-2026

**PW-1**

ಮುಖ್ಯ ವಿಚಾರಣೆಃ ಶ್ರೀ. ಎಸ್.ವಿ.ಡಿ. ವಕೀಲರಿಂದಃ

ಡಿಕ್ರಿದಾರಳ ಜಿ.ಪಿ.ಎ ದಾರ ಹಾಜರಿರುತ್ತೇನೆ. ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿರುತ್ತೇನೆ. ಅದನ್ನು ನನ್ನ ಮುಖ್ಯ ವಿಚಾರಣೆಯ ಸಾಕ್ಷ್ಯವನ್ನಾಗಿ ಪರಿಗಣಿಸಬೇಕೆಂದು ಪ್ರಾರ್ಥಿಸಿಕೊಳ್ಳುತ್ತೇನೆ. ಪ್ರಮಾಣ ಪತ್ರದಲ್ಲಿ ಬರೆಸಿರುವ ಎಲ್ಲಾ ವಿಷಯಗಳು ಸತ್ಯ ಮತ್ತು ಸರಿ ಇದ್ದು, ಅವುಗಳನ್ನು ಓದಿ ತಿಳಿದುಕೊಂಡು ಸರಿ ಇದೆ ಎಂದು ತಿಳಿದು ಸಹಿ ಮಾಡಿರುತ್ತೇನೆ ಎಂದು ಪ್ರಮಾಣೀಕರಿಸಿರುತ್ತಾರೆ. ಪಿಡಬ್ಲ್ಯೂ-1 ಎಂದು ವಿಚಾರಿಸಲಾಯಿತು.

ಡಿಕ್ರಿದಾರಳು ನನಗೆ ಬರೆದುಕೊಟ್ಟ ಜಿ.ಪಿ.ಎ. ಯ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-1 ಎಂದು, ಓ.ಎಸ್. ನಂಬರ್ 79/2018 ರ ಡಿಕ್ರಿಯ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-2 ಎಂದು, ತೀರ್ಪುಋಣಿಗೆ ಕಳುಹಿಸಿದ ವಕೀಲರ ನೋಟೀಸಿನ ಕಚೇರಿ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-3 ಎಂದು, 2 ನೇ ತೀರ್ಪುಋಣಿ ಸ್ವೀಕರಿಸದೇ ಮರಳಿ ಬಂದ ಅಂಚೆ ಲಕೋಟೆಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-4 ಎಂದು, ಅದರೊಳಗಿರುವ ನೋಟೀಸನ್ನು ತೆರೆದ ನ್ಯಾಯಾಲಯದಲ್ಲಿ ತೆಗೆದು ಅದನ್ನು ನಿಪಿ-4(ಎ) ಎಂದು, 1 ನೇ ತೀರ್ಪುಋಣಿ ನಿಪಿ-3 ಕ್ಕೆ ಕಳುಹಿಸಿದ ಪ್ರತ್ಯುತ್ತರವನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-5 ಎಂದು ಗುರುತಿಸಲಾಯಿತು.

ಪಾಟೀ ಸವಾಲುಃ ತೀರ್ಪುಋಣಿ ಪರಃ ಶ್ರೀ. ಕೆ.ಎನ್.ಹೆಚ್. ವಕೀಲರು ಸಮಯವನ್ನು ಕೋರಿದ್ದು, ಕೋರಿಕೆಯ ಮೇರೆಗೆ ಸಮಯಾವಕಾಶ ನೀಡಲಾಯಿತು.

ನನ್ನ ಉಕ್ತಲೇಖನಾ ರೀತ್ಯಾ ಬಹಿರಂಗ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಓದಿ ಹೇಳಿ ಕೇಳಿ ಸರಿ ಇದೆ.

ಪ್ರ.ಸಿ.ನ್ಯಾ ಮತ್ತು ಪ್ರ.ದ.ನ್ಯಾದಂ., ಕಾರ್ಕಳ

PW.1 present and filed
chief affidavit in lieu of his

examination chief. Same is accepted and examined as PW1 and got marked Ex.P1 to 8.

Plaintiff counsel prays time for futher chief of PW.1.

For Further chief of PW.1 by

Prl. Civil Judge & JMFC.
Karkala